ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 5/2/2020

# ಸಿದ್ಧಗಂಗಾ ಮಠಕ್ಕೆ ಸಬ್ಸಿಡಿ ಧಾನ್ಯ

ಬೆಂಗಳೂರು: ಸಾರ್ವಜನಿಕರ ತೀವ್ರ ಟೀಕೆಗೆ ಮಣಿದ ರಾಜ್ಯ ಸರ್ಕಾರ ಅನ್ನದಾಸೋಹ ಯೋಜನೆಯಡಿ ಶ್ರೀಸಿದ್ಧಗಂಗಾ ಸೇರಿದಂತೆ 351 ಶಿಕ್ಷಣ ಸಂಸ್ಥೆಗಳಿಗೆ ಸಬ್ಸಿಡಿ ದರದಲ್ಲಿ ನೀಡುತ್ತಿದ್ದ ಆಹಾರ ಪದಾರ್ಥಗಳನ್ನು ಮುಂದುವರಿಸಲು ನಿರ್ಧರಿಸಿದೆ.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ವಿಶೇಷವಾಗಿ ಸಿದ್ಧಗಂಗಾ ಮಠದಲ್ಲಿ ವಿದ್ಯಾರ್ಥಿಗಳಿಗೆ ಅನ್ನದಾಸೋಹಕ್ಕಾಗಿ ಸಬ್ಸಿಡಿ ದರದಲ್ಲಿ ನೀಡುತ್ತಿದ್ದ ಆಹಾರ ಪದಾರ್ಥ ಸ್ಥಗಿತಗೊಳಿಸಿದ ವಿಷಯ ರಾಜಕೀಯ ಹಾಗೂ ಸಾರ್ವಜನಿಕ ವಲಯದಲ್ಲಿ ತೀವ್ರ ಟೀಕೆಗೆ ಒಳಗಾಗಿತ್ತು. ಸಂಪುಟ ಸಭೆ ಆರಂಭ ಆಗುತ್ತಿದ್ದಂತೆಯೇ ಸ್ವತಃ ಮುಖ್ಯಮಂತ್ರಿ ಯಡಿಯೂರಪ್ಪ ಈ ವಿಚಾರ ಪ್ರಸ್ತಾಪಿಸಿದರು. ಆಹಾರ ಮತ್ತು ನಾಗರಿಕ ಪೂರೈಕೆ ಸಚಿವೆ ಶಶಿಕಲಾ ಜೊಲ್ಲೆ ವಿವರ ನೀಡಿದರು. ಕೇಂದ್ರ ಸರ್ಕಾರದ ನಿಯಮದಿಂದಾಗಿ ಈ ಸಂಸ್ಥೆಗಳಿಗೆ ಸಬ್ಸಿಡಿ ದರದಲ್ಲಿ ಆಹಾರ ಪದಾರ್ಥ ನಿಲ್ಲಿಸಬೇಕಾಯಿತು ಎನ್ನುವುದನ್ನು ಅಧಿಕಾರಿಗಳು ಸರ್ಕಾರದ ಗಮನಕ್ಕೆ ತಾರದ ಬಗ್ಗೆ ಮುಖ್ಯಮಂತ್ರಿಗಳು ಸಿಡಿಮಿಡಿಗೊಂಡರು. ಶ್ರೀಸಿದ್ಧಗಂಗಾ ಸೇರಿದಂತೆ 352 ಶೈಕ್ಷಣಿಕ ಸಂಸ್ಥೆಗಳ ಒಟ್ಟು 32,700 ಮಕ್ಕಳಿಗೆ ಅನುಕೂಲವಾಗುವಂತೆ ಅಕ್ಕಿ ಮತ್ತು ಗೋಧಿಯನ್ನು ಮುಂದಿನ 1 ವರ್ಷದವರೆಗೆ ಸಬ್ಸಿಡಿ ದರದಲ್ಲಿ ಪೂರೈಸಲು ಒಟ್ಟು 18 ಕೋಟಿ ರೂ.ಗಳನ್ನು ತಕ್ಷಣ ಬಿಡುಗಡೆ ಮಾಡಲು ಸಂಪುಟ ಒಪ್ಪಿಕೊಂಡಿತು.